# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ : 393(526)
ಸದಸ್ಯರ ಹೆಸರು : ಶ್ರೀ ಡಾ||ವೈ.ಎ.ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ)
ಉತ್ತರಿಸುವ ದಿನಾಂಕ : 19-02-2024.
ಉತ್ತರಿಸುವ ಸಚಿವರು : ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖಾ ಸಚಿವರು.

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಅನುದಾನಿತ ಶಾಲಾ ಕಾಲೇಜುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಬೋಧಕ/ಬೋಧಕೇತರರಿಗೆ "ಆರೋಗ್ಯ ವಿಮಾ ಯೋಜನೆ" ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿದೆ |
| ಆ) | ಇದರಿಂದಾಗಿ ಬೋಧಕ/ಬೋಧಕೇತರರಿಗೆ ತೊಂದರೆ ಉಂಟಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿದೆ |
| ಇ) | ಸದರಿಯವರಿಗೂ "ಆರೋಗ್ಯ ವಿಮಾ ಯೋಜನೆ" ಯನ್ನು ವಿಸ್ತರಿಸದಿರಲು ಕಾರಣಗಳೇನು; (ಮಾಹಿತಿ ನೀಡುವುದು) | ಅನುದಾನಿತ ಶಾಲಾ ಕಾಲೇಜುಗಳ ನೌಕರರು ಕರ್ನಾಟಕ ಶಿಕ್ಷಣ ಅಧಿನಿಯಮ-1983 ಮತ್ತು ಅದರಡಿ ರಚಿಸಲ್ಪಟ್ಟ ಕರ್ನಾಟಕ ಶಿಕ್ಷಣ ಸಂಸ್ಥೆಗಳ (Classification, Regulation and Prescrition of Curricula) ನಿಯಮಗಳು-1995ರ ವ್ಯಾಪ್ತಿಗೆ ಒಳಪಡುತ್ತಾರೆ. ಇವರನ್ನು ಸರ್ಕಾರಿ ನೌಕರರೆಂದು ಪರಿಗಣಿಸಲಾಗುವುದಿಲ್ಲ. ಅನುದಾನಿತ ಶಿಕ್ಷಣ ಸಂಸ್ಥೆಗಳ ಸಿಬ್ಬಂದಿಗಳು ಕರ್ನಾಟಕ ಸರ್ಕಾರಿ ನೌಕರರ (ವೈದ್ಯಕೀಯ ಹಾಜರಾತಿ) ನಿಯಮಗಳು-1963ರ ವ್ಯಾಪ್ತಿಗೆ ಒಳಪಡುವುದಿಲ್ಲ ಹಾಗೂ ಕರ್ನಾಟಕ ಶಿಕ್ಷಣ ಸಂಸ್ಥೆಗಳು(ಖಾಸಗಿ ಅನುದಾನಿತ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಂಸ್ಥೆಗಳ ನೌಕರರ ನೇಮಕಾತಿ ಮತ್ತು ಸೇವಾ ಷರತ್ತು ಹಾಗೂ ನಿಬಂಧನೆಗಳು) ನಿಯಮಗಳು 1999ರ ಅನುಬಂಧ -ii (3) ರನ್ವಯ ವೈದ್ಯಕೀಯ ವೆಚ್ಚ ಮರುಪಾವತಿ ಸೌಲಭ್ಯಕ್ಕೂ ಅರ್ಹರಾಗಿರುವುದಿಲ್ಲ. ಆದುದರಿಂದ ಖಾಸಗಿ ಅನುದಾನಿತ ಸಿಬ್ಬಂದಿಗಳು ಜ್ಯೋತಿ ಸಂಜೀವಿನಿ ಯೋಜನೆಯ ವ್ಯಾಪ್ತಿಗೆ ಒಳಪಡುವುದಿಲ್ಲ. |
| ಈ) | ಯಾವ ಕಾಲಮಿತಿಯಲ್ಲಿ ಈ "ಆರೋಗ್ಯ ವಿಮಾ ಯೋಜನೆ" ಯನ್ನು ಅನುಷ್ಠಾನಗೊಳಿಸಲಾಗುವುದು? | |

ಸಂಖ್ಯೆ: ಇಪಿ 62 ಎಸ್ಇಎಸ್ 2024

**(ಎಸ್ ಮಧುಬಂಗಾರಪ್ಪ)**
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖಾ ಸಚಿವರು